# CAREERS360

# KARNATAKA SSLC FIRST LANGUAGE KANNADA QUESTION PAPER 2019 (SET A TO D)

QUESTION PAPER SAMPLE PAPER MODEL PAPER MODEL QUESTIIONS ANSWER KEY ANSWER CODES SOLUTIONS RESPONSE SHEET MOCK TEST EXAMINATION QUESTIONS TEST PAPERS SOLUTION PAPER SOLUTION SHEET TESTING PATTERN NEGATIVE MARKING MARKING SCHEME EXAM PATTERN PAPER PATTERN MODEL TEST PAPERS MODEL TEST QUESTIONS ANSWER KEY WITH SOLUTIONS SOLVED PAPERS SOLVED QUESTIONS

**A**

**SL. No. : XX**

ಒಟ್ಟು ಪ್ರಶ್ನೆಗಳ ಸಂಖ್ಯೆ : 49 ]
Total No. of Questions : 49 ]

**CCE RF**
**CCE RR**
**REVISED**

[ ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 8
[ Total No. of Printed Pages : 8

**ಸಂಕೇತ ಸಂಖ್ಯೆ : 01-K**

**Code No. : 01-K**

# ವಿಷಯ : ಪ್ರಥಮ ಭಾಷೆ — ಕನ್ನಡ

# Subject : First Language — KANNADA

**(ಹೊಸ ಪಠ್ಯಕ್ರಮ / New Syllabus)**

**(ಶಾಲಾ ಅಭ್ಯರ್ಥಿ & ಪುನರಾವರ್ತಿತ ಶಾಲಾ ಅಭ್ಯರ್ಥಿ / Regular Fresh & Regular Repeater)**

ದಿನಾಂಕ : 21. 03. 2019 ] [ Date : 21. 03. 2019

ಸಮಯ : ಬೆಳಗ್ಗೆ 9-30 ರಿಂದ 12-30 ರವರೆಗೆ ] [ Time : 9-30 A.M. to 12-30 P.M.

ಗರಿಷ್ಠ ಅಂಕಗಳು : 100 ] [ Max. Marks : 100

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು 49 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

ಇಲ್ಲಿ ಕತ್ತರಿಸಿ

**TEAR HERE TO OPEN THE QUESTION PAPER**
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

**Tear here**

## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪಠ್ಯಪೂರಕ ಅಧ್ಯಯನ)

**ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ *ಒಂದೊಂದು* ವಾಕ್ಯದಲ್ಲಿ ಉತ್ತರ ಬರೆಯಿರಿ :** $9 \times 1 = 9$

1. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು ?

2. ಲಂಡನ್ನಿನಲ್ಲಿ ನೆಲ್ಸನ್‌ರವರ ಮೂರ್ತಿಯಿರುವ ಸ್ಥಳದ ಹೆಸರೇನು ?

3. 'ಶಿವಾನುಭವ ಶಬ್ದಕೋಶ' ಪುಸ್ತಕ ಬರೆದವರು ಯಾರು ?

4. ಶಾನುಭೋಗರ ಬ್ರಹ್ಮಾಸ್ತ್ರ ಯಾವುದು ?

5. ಸುಕುಮಾರಸ್ವಾಮಿಗೆ ಯಾವ ಪಟ್ಟವನ್ನು ಕಟ್ಟಲಾಯಿತು ?

6. ಅಶ್ವಿನಿ ದೇವತೆಗಳ ವರಬಲದಿಂದ ಜನಿಸಿದವರು ಯಾರು ?

7. ಆಶ್ವಯುಜದ ಬತ್ತದ ಗದ್ದೆಯ ಬಣ್ಣ ಯಾವ ಹಸುರಿನಂತಿದೆ ?

8. ದ್ರೋಣನು ಯಾರೊಡನೆ ಪರಶುರಾಮನ ಬಳಿಗೆ ಬಂದನು ?

9. ಪುಟ್ಟ ಪೋರಿಯ ಅಮ್ಮ ಎಲ್ಲಿ ಮಲಗಿದ್ದಾಳೆ ?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $10 \times 2 = 20$

10. ವೂಲವರ್ಥ ಅಂಗಡಿಯಲ್ಲಿ ಸಿಗುವ ವಸ್ತುಗಳಾವುವು ?

11. ಅಶೋಕ ಪೈ ಅವರು ಹೇಳಿದ ಸಂಶೋಧನಾ ಸತ್ಯವೇನು ?

12. ಶಾನುಭೋಗರು ಮೂರ್ಛೆಯಲ್ಲಿದ್ದಾಗ ನಡೆದ ಘಟನೆಯನ್ನು ಸಂಕ್ಷಿಪ್ತವಾಗಿ ತಿಳಿಸಿ.

13. ವೃಷಭಾಂಕನು ಸುಕುಮಾರಸ್ವಾಮಿಗೆ ವ್ಯಾಧಿಯಿದೆ ಎಂದುಕೊಳ್ಳಲು ಕಾರಣವೇನು ?

14. ಕವಿ ಕುವೆಂಪು ಅವರಿಗೆ ಆಗಸದಿಂದ ಸಂಜೆಯ ಬಿಸಿಲವರೆಗೂ ಎಲ್ಲೆಲ್ಲಿ ಹಸುರು ಕಂಡುಬಂದಿದೆ ?

15. ದ್ರೋಣನು ಶಪಥ ಮಾಡುವಾಗ ಹೇಳಿದ ಮಾತುಗಳಾವುವು ?

16. ವಿವೇಕಾನಂದರು ಏಕೆ ಧಾರ್ಮಿಕ ಮೂಲಭೂತವಾದಕ್ಕೆ ಉಗ್ರ ವಿರೋಧಿಯಾಗಿದ್ದರು ?

17. ಭಗತ್‌ಸಿಂಗ್ ತನಗೆ ಪ್ರಿಯವಾದ ಮಾವಿನ ಹಣ್ಣೊಂದನ್ನು ನಿರಾಕರಿಸಿದ್ದಕ್ಕೆ ಕಾರಣ ಹೇಗೆ ತಿಳಿಯಿತು ?

18. ವರ್ತಕನು ನಗರದಿಂದ ಹಳ್ಳಿಗೆ ಹೋಗಬೇಕಾಗಿ ಬಂದ ಸಂದರ್ಭವನ್ನು ತಿಳಿಸಿ.

19. 'ಉಪ್ಪು' ಎಂಬ ಉತ್ತರ ಬರಲು ಹೇಳಿದ ಒಗಟನ್ನು ಬರೆಯಿರಿ.

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** 4 × 3 = 12

20. "ಬೆಳಕಿಗೊಲಿದವರ್ ಉರಿವ ಬತ್ತಿಯ ಕರುಕ ಕಾಣರು"

21. "ಪ್ರಕೃತಿ ವಿಕೃತಿಯಾದ ಮನುಷ್ಯನಾಯುಷ್ಯಂ ಕುಂದುಗುಂ"

22. "ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ"

23. "ತನ್ನ ಮಾತೆಯಂ ಸರ್ವಜನಮುಂ ಬಂಜೆಯೆನ್ನದಿರ್ದಪುದೆ"

**ಈ ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** 2 × 3 = 6

24. ಸಾರಾ ಅಬೂಬಕ್ಕರ್

25. ಕುಮಾರವ್ಯಾಸ

26. **ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** 1 × 4 = 4

ನೀಲಮೇಘ ....................................................

..................................................................

..................................................................

..................................................................

.................................. ಹಾರುತಿದೆ ನೋಡಿದಿರಾ ?

***ಅಥವಾ***

ಯುಗ–ಯುಗಗಳ ............................................

..................................................................

..................................................................

..................................................................

.................................. ಹಾರುತಿದೆ ನೋಡಿದಿರಾ ?

27. **ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** 1 × 4 = 4

ನಿಮಗೆ ಪೊಡೆಮಟ್ಟು ಪೋಪೀ ।
ಸಮಕಟ್ಟಿಂ ಬಂದೆನಹಿತರೊಳ್ ಸಂಧಿಯನೇಂ ॥
ಸಮಕೊಳಿಸಲೆಂದು ಬಂದೆನೆ ।
ಸಮರದೊಳೆನಗಜ್ಜ ಪೇಟಿಮಾವುದು ಕಜ್ಜಂ ॥

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** 2 × 4 = 8

28. ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.

*ಅಥವಾ*

ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಸ್ಥಾಪಿಸಲಾದ 'ಪ್ರಜಾಪ್ರತಿನಿಧಿ ಸಭೆ' ಹಾಗೂ 'ನ್ಯಾಯ ವಿಧಾಯಕ ಸಭೆ'ಯನ್ನು ಕುರಿತು ವಿವರಿಸಿ.

29. ನಾವು ಯಾವ ಸಂಕಲ್ಪ ಕೈಗೊಳ್ಳಬೇಕೆಂಬುದು ಕವಿ ಶಿವರುದ್ರಪ್ಪನವರ ಆಶಯವಾಗಿದೆ ? ವಿವರಿಸಿ.

*ಅಥವಾ*

ಸಂಕಲ್ಪ ಮತ್ತು ಅನುಷ್ಠಾನದ ಕುರಿತು ಕವಿ ಶಿವರುದ್ರಪ್ಪನವರ ಅಭಿಪ್ರಾಯವನ್ನು ವಿವರಿಸಿ.

30. **ಈ ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :** 2 × 2 = 4

ಯುದ್ಧ, ಇತಿಹಾಸದುದ್ದಕ್ಕೂ ತನ್ನ ಇರುವಿಕೆಯನ್ನು ತೋರಿಸುತ್ತಾ ಬಂದಿದೆ. ಯಾವುದೇ ಸಾಮ್ರಾಜ್ಯದ ಏಳುಬೀಳುಗಳಲ್ಲಿ ಅದು ಪ್ರಮುಖ ಪಾತ್ರವಹಿಸಿದೆ. ಯುದ್ಧ ನಡೆಯಲು ಕಾರಣಗಳು ಹಲವು. ಸಾಮ್ರಾಜ್ಯ ವಿಸ್ತರಣೆ, ಲೋಭ, ವೀರತೆಯ ಪ್ರದರ್ಶನ ಒಂದು ಕಡೆಯಾದರೆ, ಕುಟುಂಬ ಕಲಹಗಳೂ ಯುದ್ಧಕ್ಕೆ ನಾಂದಿ ಹಾಡಿದ ಘಟನೆಗಳು ದಾಖಲಾಗಿವೆ. ಸುಮಾರು ಐದು ಸಾವಿರ ವರ್ಷಗಳ ಹಿಂದೆ ನಡೆದ ಕುರುಕ್ಷೇತ್ರ ಯುದ್ಧ ಇದಕ್ಕೆ ಸ್ಪಷ್ಟ ನಿದರ್ಶನ. ಕುರುವಂಶದ ರಾಜಕುಮಾರರ ಅಂತಃಕಲಹ ಐವತ್ತು ಲಕ್ಷ ಜನರ ಪ್ರಾಣಹಾನಿಯೊಂದಿಗೆ ಪರ್ಯವಸಾನವಾಯಿತು. ಐತಿಹ್ಯದಂತೆ ಕೇವಲ ಹದಿನೆಂಟು ದಿನ ನಡೆದ ಈ ಯುದ್ಧ, ಕಂಡ ಪರಿಣಾಮ ಅತ್ಯಂತ ಘೋರ.

ಭಾರತ ತನ್ನ ಇತಿಹಾಸದಲ್ಲಿ ಕಂಡ ಅತ್ಯಂತ ವರ್ಣರಂಜಿತ ವ್ಯಕ್ತಿತ್ವ ಕೌಟಿಲ್ಯನದು. ತನ್ನ ಹಠದ ಪಟ್ಟನ್ನು ಸಡಿಲಿಸದೆ, ಮನೋನಿಶ್ಚಯದಂತೆ ಅಪೂರ್ವಕುಶಲತೆಯನ್ನು ತೋರಿದ ಪ್ರತಿಭಾವಂತನೀತ. ಸರಳ ತಂತ್ರೋಪಾಯಗಳಿಂದ ಚಂದ್ರಗುಪ್ತನ ಶತ್ರುಬಲವನ್ನು ನಿರಾವಲಂಬನಗೊಳಿಸಿ ಮೌರ್ಯ ವಂಶದ ಸ್ಥಾಪನೆಗೆ ಮಾರ್ಗದರ್ಶಕನಾಗುತ್ತಾನೆ. ತನ್ನನ್ನೇ ಹಿಂಬಾಲಿಸಿ ಬಂದ ರಾಜ್ಯಲಕ್ಷ್ಮೀ, ಅಧಿಕಾರಗಳನ್ನು ದೂರೀಕರಿಸಿ ವಿರಕ್ತನಂತೆ ಆಶ್ರಮವಾಸಿಯಾಗುತ್ತಾನೆ. ಚಾಣಕ್ಯನ ಪ್ರಕಾರ ಯುದ್ಧದಲ್ಲಿ ಮೂರು ವಿಧಗಳು. ಮೊದಲನೆಯದು ಪ್ರಕಾಶಯುದ್ಧ – ಸೂಚಿತ ಸ್ಥಳದಲ್ಲಿ ನಿರ್ದಿಷ್ಟ ಸಮಯಕ್ಕೆ ನಡೆಯುವ ಸಂಗ್ರಾಮ. ಎರಡನೆಯದು ಕೂಟಯುದ್ಧ – ತಂತ್ರಗಳ ಮೂಲಕ ಯುದ್ಧ ಮಾಡುವುದು. ಮೂರನೆಯದು ಮೌನಯುದ್ಧ – ಶತ್ರು ಅಧಿಕಾರಿಗಳನ್ನು ನಾಶಪಡಿಸಲು ಗುಪ್ತ ಕಾರ್ಯಾಚರಣೆ ನಡೆಸುವುದು. ಯಾವಾಗ ರಾಜ ಶತ್ರುಗಳಿಗಿಂತ ಬಲಿಷ್ಠನಾಗಿದ್ದು ಪರಿಸ್ಥಿತಿ ಅನುಕೂಲಕರವಾಗಿರುತ್ತದೋ ಆಗ ಅವನು ಮುಕ್ತ ಯುದ್ಧವನ್ನೇ ಮಾಡಬೇಕು. ಸೂಚಿತ ಸ್ಥಳದಲ್ಲಿ, ನಿರ್ದಿಷ್ಟ ಸಮಯದಲ್ಲಿ ನಡೆಯುವ ಮುಕ್ತ ಯುದ್ಧವೇ ಧರ್ಮಯುದ್ಧ.

*ಪ್ರಶ್ನೆಗಳು :*

ಅ) ಚಾಣಕ್ಯನ ಪ್ರಕಾರ ಮೂರು ಬಗೆಯ ಯುದ್ಧಗಳಾವುವು ? ವಿವರಿಸಿ.

ಆ) ಯುದ್ಧಕ್ಕೆ ಕಾರಣವಾದ ಅಂಶಗಳನ್ನು ಒಂದು ನಿದರ್ಶನದೊಂದಿಗೆ ಬರೆಯಿರಿ.

## ವಿಭಾಗ – 'ಬಿ'

### (ಅನ್ವಯಿಕ ವ್ಯಾಕರಣ, ಅಲಂಕಾರ ಹಾಗೂ ಛಂದಸ್ಸು)

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ :** $10 \times 1 = 10$

31. 'ಸಪ್ತಮೀ' ವಿಭಕ್ತಿ ಪ್ರತ್ಯಯದ ಕಾರಕಾರ್ಥ

(ಎ) ಸಂಬಂಧ (ಬಿ) ಸಂಪ್ರದಾನ

(ಸಿ) ಅಧಿಕರಣ (ಡಿ) ಅಪಾದಾನ

32. 'ವಾಗ್ದೇವಿ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

(ಎ) ಜಶ್ತ್ವ ಸಂಧಿ (ಬಿ) ಶ್ಚುತ್ವ ಸಂಧಿ

(ಸಿ) ಆದೇಶ ಸಂಧಿ (ಡಿ) ಯಣ್ ಸಂಧಿ

33. 'ಮಾಡು' ಧಾತುವಿನ ವಿಧ್ಯರ್ಥಕ ರೂಪ

(ಎ) ಮಾಡಿಯಾನು (ಬಿ) ಮಾಡದು

(ಸಿ) ಮಾಡೀತು (ಡಿ) ಮಾಡಲಿ

34. ಸ್ವತಂತ್ರ ವಾಕ್ಯಗಳಾಗಿ ನಿಲ್ಲಬಲ್ಲ ಅನೇಕ ಉಪವಾಕ್ಯಗಳೊಡನೆ ಒಂದು ಪೂರ್ಣಾಭಿಪ್ರಾಯದ ವಾಕ್ಯವಾಗಿದ್ದರೆ ಅದು

(ಎ) ಸಾಮಾನ್ಯ ವಾಕ್ಯ (ಬಿ) ಸಂಯೋಜಿತ ವಾಕ್ಯ

(ಸಿ) ಮಿಶ್ರ ವಾಕ್ಯ (ಡಿ) ಪ್ರಶ್ನಾರ್ಥಕ ವಾಕ್ಯ

35. ಅನ್ವರ್ಥನಾಮಪದಕ್ಕೆ ಉದಾಹರಣೆಯಾದ ಪದವಿದು

(ಎ) ರಾಹುಲ (ಬಿ) ಪರ್ವತ

(ಸಿ) ಮನುಷ್ಯ (ಡಿ) ವಿಜ್ಞಾನಿ

36. 'ತತ್ಪುರುಷ ಸಮಾಸ'ಕ್ಕೆ ಉದಾಹರಣೆಯಾದ ಪದ

(ಎ) ಬೆಟ್ಟದಾವರೆ (ಬಿ) ಮುಕ್ಕಣ್ಣು

(ಸಿ) ಅಂಗೈ (ಡಿ) ನೆಯ್ದುವಸ್ತ್ರ

37. ಪಾರಿಭಾಷಿಕ ಪದಗಳನ್ನು ಬಳಸುವಾಗ, ಅನ್ಯಭಾಷೆಯ ಪದಗಳನ್ನು ಬಳಸುವಾಗ, ಪ್ರಮುಖ ಪದಗಳನ್ನು ಸೂಚಿಸುವಾಗ ಈ ಚಿಹ್ನೆಯನ್ನು ಬಳಸಲಾಗುವುದು.

(ಎ) ಉದ್ಧರಣ ಚಿಹ್ನೆ (ಬಿ) ಆವರಣ ಚಿಹ್ನೆ

(ಸಿ) ವಾಕ್ಯವೇಷ್ಠನ ಚಿಹ್ನೆ (ಡಿ) ವಿವರಣಾತ್ಮಕ ಚಿಹ್ನೆ

38. ಹಲವು ವಸ್ತುಗಳಲ್ಲಿ ಒಂದನ್ನು ನಿಶ್ಚಯವಾಗಿ ಹೇಳುವ ಸಂದರ್ಭದಲ್ಲಿ ಈ ಅವ್ಯಯವನ್ನು ಬಳಸಲಾಗುತ್ತದೆ.

(ಎ) ಅನುಕರಣಾವ್ಯಯ
(ಬಿ) ಕ್ರಿಯಾರ್ಥಕಾವ್ಯಯ
(ಸಿ) ಸಂಬಂಧಾರ್ಥಕಾವ್ಯಯ
(ಡಿ) ಅವಧಾರಣಾರ್ಥಕಾವ್ಯಯ

39. 'ಸ್ಯಾನಿಟರಿ' ಪದವು ಕನ್ನಡಕ್ಕೆ ಈ ಭಾಷೆಯಿಂದ ಬಂದಿದೆ

(ಎ) ಹಿಂದೂಸ್ಥಾನಿ
(ಬಿ) ಇಂಗ್ಲಿಷ್
(ಸಿ) ಗ್ರೀಕ್
(ಡಿ) ಪೋರ್ಚ್‌ಗೀಸ್

40. ತದ್ಧಿತಾಂತ ಭಾವನಾಮಕ್ಕೆ ಉದಾಹರಣೆಯಾಗುವ ಪದವಿದು

(ಎ) ಬಳೆಗಾರ
(ಬಿ) ಚಂದ್ರನಂತೆ
(ಸಿ) ಕಪ್ಪು
(ಡಿ) ಸಿರಿವಂತ

**ಈ ಕೆಳಗಿನವುಗಳಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** $4 \times 1 = 4$

41. ಹಾಲ್ಜೇನು : ಜೋಡುನುಡಿ :: ಮೊಟ್ಟಮೊದಲು : ......................... .

42. ವಂಧ್ಯಾ : ಬಂಜೆ :: ಕೋಕಿಲಾ : ......................... .

43. ಚಿತ್ತ : ಮನಸ್ಸು :: ಕೈವಾರ : ......................... .

44. ಸಕ್ಕಾರಿ : ಸಕ್ಕರೆ :: ಇಸವಾಸ : ......................... .

45. **ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** $1 \times 3 = 3$

ಕೊರಳ ಸೆರೆ ಹಿಗ್ಗಿದವು ದೃಗುಜಲ
ಉರವಣಿಸಿ ಕಡು ನೊಂದನಕಟಾ
ಕುರುಪತಿಗೆ ಕೇಡಾದುದೆಂದನು ತನ್ನ ಮನದೊಳಗೆ

***ಅಥವಾ***

ಅಂತೆಂಬನಾರ್ಗೆ ಪಿರಿದುಂ
ಭ್ರಾಂತು ದಲೇಂ ದ್ರೋಣನೆಂಬನೇಂ ಪಾರ್ವನೆ ಪೇ

46. **ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** $1 \times 3 = 3$

"ಭೀಮ ದುರ್ಯೋಧನರು ಮದಗಜಗಳಂತೆ ಹೋರಾಡಿದರು"

***ಅಥವಾ***

ಮಾತು ಬಲ್ಲವನಿಗೆ ಜಗಳವಿಲ್ಲ; ಊಟ ಬಲ್ಲವನಿಗೆ ರೋಗವಿಲ್ಲ.

## ವಿಭಾಗ – 'ಸಿ'

### (ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲ)

47. **ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ *ಒಂದನ್ನು* ವಿಸ್ತರಿಸಿ ಬರೆಯಿರಿ :** 1 × 3 = 3

* ಹೆತ್ತತಾಯಿ, ಹೊತ್ತನಾಡು ಸ್ವರ್ಗಕ್ಕಿಂತ ಮಿಗಿಲು
* ಚಿಂತೆಯೇ ಮುಪ್ಪು; ಸಂತೋಷವೇ ಯೌವನ
* ದೇಶ ನೋಡು; ಕೋಶ ಓದು

48. ನಿಮ್ಮನ್ನು ಸರಗೂರಿನ ಕಾವೇರಿ ಪ್ರೌಢಶಾಲೆಯ 'ಪ್ರಕೃತಿ' ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ಆಚರಿಸಿದ 'ಕನ್ನಡ ರಾಜ್ಯೋತ್ಸವ' ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ 'ವಿಜಯವಾಣಿ' ದಿನಪತ್ರಿಕೆಯ ಸಂಪಾದಕರಿಗೆ ಒಂದು ಮನವಿ ಪತ್ರ ಬರೆಯಿರಿ. 1 × 5 = 5

***ಅಥವಾ***

ನಿಮ್ಮನ್ನು ಮಂಡ್ಯದ ಅನಿಕೇತನ ಪ್ರೌಢಶಾಲೆಯ 'ಪ್ರಾರ್ಥನಾ' ಎಂದು ಭಾವಿಸಿಕೊಂಡು ನಿಮ್ಮ ವಿದ್ಯಾಭ್ಯಾಸದ ಪ್ರಗತಿಯನ್ನು ಕುರಿತು ಭದ್ರಾವತಿಯ ನೇತಾಜಿನಗರದಲ್ಲಿ ವಾಸವಾಗಿರುವ 'ವನಿತ' ಎಂಬ ಹೆಸರಿನ ತಾಯಿಯವರಿಗೆ ಒಂದು ಪತ್ರ ಬರೆಯಿರಿ.

49. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ *ಒಂದನ್ನು* ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ :** 1 × 5 = 5

* ಜನಸಂಖ್ಯಾ ಸ್ಫೋಟಕ್ಕೆ ಕಾರಣ ಹಾಗೂ ಪರಿಹಾರೋಪಾಯ
* ರಾಷ್ಟ್ರೀಯ ಭಾವೈಕ್ಯತೆ
* ಜಾಗತಿಕ ತಾಪಮಾನ ಹೆಚ್ಚಳದಿಂದಾಗುವ ದುಷ್ಪರಿಣಾಮ ಹಾಗೂ ಪರಿಹಾರಗಳು

**B** SL. No. : XX

**CCE RR**
**UN-REVISED**

ಒಟ್ಟು ಪ್ರಶ್ನೆಗಳ ಸಂಖ್ಯೆ : 49 ] [ ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 8

Total No. of Questions : 49 ] [ Total No. of Printed Pages : 8

**ಸಂಕೇತ ಸಂಖ್ಯೆ : 01-K** **Code No. : 01-K**

# ವಿಷಯ : ಪ್ರಥಮ ಭಾಷೆ — ಕನ್ನಡ

# Subject : First Language — KANNADA

**(ಹಳೆ ಪಠ್ಯಕ್ರಮ / Old Syllabus)**

**(ಪುನರಾವರ್ತಿತ ಶಾಲಾ ಅಭ್ಯರ್ಥಿ / Regular Repeater)**

ದಿನಾಂಕ : 21. 03. 2019 ] [ Date : 21. 03. 2019

ಸಮಯ : ಬೆಳಗ್ಗೆ 9-30 ರಿಂದ 12-30 ರವರೆಗೆ ] [ Time : 9-30 A.M. to 12-30 P.M.

ಗರಿಷ್ಠ ಅಂಕಗಳು : 100 ] [ Max. Marks : 100

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು 49 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.



ಇಲ್ಲಿ ಕತ್ತರಿಸಿ

TEAR HERE TO OPEN THE QUESTION PAPER
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

Tear here

## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪೋಷಕ ಅಧ್ಯಯನ)

**ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ *ಒಂದೊಂದು* ವಾಕ್ಯದಲ್ಲಿ ಉತ್ತರ ಬರೆಯಿರಿ :** $9 \times 1 = 9$

1. ಅಮೆರಿಕ, ಕೆನಡಾ ದೇಶಗಳಲ್ಲಿ ಮನೆಗಳನ್ನು ಸಾಧಾರಣವಾಗಿ ಯಾವುದರಿಂದ ಕಟ್ಟಿರುತ್ತಾರೆ ?
2. ಬುಕ್ಕರಾಯನ ರಾಜ್ಯಭಾರ ಕಾಲದಲ್ಲಿ ಯಾರ ಯಾರೊಳಗೆ ಸಂವಾದ ನಡೆಯಿತು ?
3. ವಿಶ್ವೇಶ್ವರಯ್ಯರವರನ್ನು ದಿವಾನರಾಗಿ ನೇಮಿಸಿದವರು ಯಾರು ?
4. ಮನೆಮಂಚಮ್ಮನ ಕತೆ ಹೇಳಿದ ಕವಿ ಯಾರು ?
5. ಶಾನುಭೋಗರ ಬ್ರಹ್ಮಾಸ್ತ್ರ ಯಾವುದು ?
6. ಘಟ ಸಂಭೂತ ಯಾರು ?
7. ಶಿವನಿಗೆ ಯಾರ ಭಕ್ತಿ ಹಿತವೆನಿಸುತ್ತದೆ ?
8. ಅಜ್ಞಾನ ತೊಲಗಿಸಲು ಕವಯಿತ್ರಿ ಏನಾಗ ಬಯಸಿದ್ದಾರೆ ?
9. ಮುದ್ದು ಪಾರಿವಾಳಗಳ ಜೋಡಿ ಎಲ್ಲಿ ಸಂಸಾರ ಹೂಡಿತ್ತು ?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $10 \times 2 = 20$

10. ಜೈನಧರ್ಮದ ರಕ್ಷಣೆಗಾಗಿ ಬುಕ್ಕರಾಯನು ಕೈಗೊಂಡ ಕ್ರಮಗಳಾವುವು ?
11. ಹೈದರಾಬಾದ್ ನಗರದಲ್ಲಿ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಸೇವೆಯನ್ನು ತಿಳಿಸಿ.
12. ಅಶೋಕ ಪೈ ಹೇಳಿದ ಸಂಶೋಧನಾ ಸತ್ಯವೇನು ?
13. ಹುಲಿಯು ಹಿಂದಿನಿಂದ ಹಾರಿ ಕೊಲ್ಲದಿರಲು ಕಾರಣಗಳೇನು ?
14. ಮಾತಿನ ಮಹತ್ವವನ್ನು ಬಸವಣ್ಣನವರು ಹೇಗೆ ವಿಶ್ಲೇಷಿಸಿದ್ದಾರೆ ?
15. ಗಡಿಯ ಆಚೆ–ಈಚೆ ಜೀವಿಗಳು ಏಕೆ ಶವವಾದವು ?
16. ಮೂಢನಂಬಿಕೆಗಳ ಬಗ್ಗೆ ಎಚ್. ನರಸಿಂಹಯ್ಯ ಅವರ ಅಭಿಪ್ರಾಯವನ್ನು ತಿಳಿಸಿ.
17. ಪಂಪನು ವೃಷಭಾಚಲದಲ್ಲಿ ತನ್ನ ಹೆಸರನ್ನು ಏಕೆ ಕೆತ್ತಿಸಲಿಲ್ಲ ?
18. ಅಂದವಾದ ಬರೆವಣಿಗೆಯ ಬಗ್ಗೆ ಗಾಂಧೀಜಿಯವರ ಅಭಿಪ್ರಾಯವೇನು ?
19. 'ತಾವರೆಬೇರು' ಎಂಬ ಉತ್ತರ ಬರುವ ಒಗಟನ್ನು ಬರೆಯಿರಿ.

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** 4 × 3 = 12

20. "ನಮ್ಮ ಪುಸ್ತಕದಲ್ಲಿ ಗಾಂಧಿ ಮೇಲೆ ಒಂದು ಪಾಠವಿದೆಯಲ್ಲ"
21. "ಹುಸಿಯದ ಬೇಹಾರಿಯೇ ಇಲ್ಲ"
22. "ಹೊಡೆದರೊ ಗುಂಡ ಕರುಣ ಇಲ್ಲದ್ಹಂಗ"
23. "ಜಾನಕಿಯ ಮಗನಿದಕೆ ಬೆದರುವನೆ"

**ಈ ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** 2 × 3 = 6

24. ವಿ.ಕೃ. ಗೋಕಾಕ್
25. ಆದಿಕವಿ ಪಂಪ

26. **ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** 1 × 4 = 4

ನೀಲಮೇಘ ಮಂಡಲ ..........................................

...................................................................

...................................................................

...................................................................

ಹಕ್ಕಿ ಹಾರುತಿದೆ ನೋಡಿದಿರಾ ?

***ಅಥವಾ***

ಯುಗ–ಯುಗಗಳ ..............................................

...................................................................

...................................................................

...................................................................

ಹಕ್ಕಿ ಹಾರುತಿದೆ ನೋಡಿದಿರಾ ?

27. **ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** 1 × 4 = 4

ಮಾರಿಗೌತಣವಾಯ್ತು ನಾಳಿನ
ಭಾರತವು ಚತುರಂಗ ಬಲದಲಿ
ಕೌರವನ ಋಣ ಹಿಂಗೆ ರಣದಲಿ ಸುಭಟಕೋಟಿಯನು
ತೀರಿಸಿಯೆ ಪತಿಯವಸರಕ್ಕೆ ಶ
ರೀರವನು ನೂಕುವೆನು ನಿನ್ನಯ
ವೀರರೈವರ ನೋಯಿಸೆನು ರಾಜೀವಸಖನಾಣೆ.

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** 2 × 4 = 8

28. ಶಬರಿಯ ಚಿಂತೆ ಹಿಂಗಿಹೋದ ಸಂದರ್ಭದ ಸ್ವಾರಸ್ಯವನ್ನು ವಿವರಿಸಿ.

***ಅಥವಾ***

ಶಬರಿಯ ಸಡಗರ, ಸಂತೋಷ ಮೇಳದವರ ಹಾಡಿನಲ್ಲಿ ಹೇಗೆ ವರ್ಣಿತವಾಗಿದೆ ?

29. ನಾವು ಯಾವ ಸಂಕಲ್ಪ ಕೈಗೊಳ್ಳಬೇಕೆಂಬುದು ಕವಿ ಶಿವರುದ್ರಪ್ಪನವರ ಆಶಯವಾಗಿದೆ ?

***ಅಥವಾ***

ಸಂಕಲ್ಪ ಮತ್ತು ಅನುಷ್ಠಾನದ ಕುರಿತು ಜಿ.ಎಸ್. ಶಿವರುದ್ರಪ್ಪನವರ ಅಭಿಪ್ರಾಯವನ್ನು ನಿಮ್ಮ ಮಾತಿನಲ್ಲಿ ವಿವರಿಸಿ.

30. **ಈ ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :** 2 × 2 = 4

ಪ್ರಪಂಚ ಸುಖ–ದುಃಖಗಳ ಆಗರ. ಕೇವಲ ಸುಖ, ಕೇವಲ ದುಃಖ ಯಾವ ಪ್ರಾಣಿ ಜೀವನದಲ್ಲಿಯೂ ಇಲ್ಲ. ಸುಖ–ದುಃಖಗಳಿಗೆ ಮನವೇ ಮೂಲ. ನಗೆ ವಿಶ್ವವ್ಯಾಪಕ. ಅದು ಸ್ವರ್ಗ, ಮರ್ತ್ಯ, ಪಾತಾಳ ಲೋಕಗಳಲ್ಲೆಲ್ಲ ಹಬ್ಬಿಕೊಂಡಿದೆ. ದೇವಾನುದೇವತೆಗಳೂ, ಮಾನವರೂ, ಪ್ರಾಣಿಗಳೂ ನಗುತ್ತವೆ. ಒಟ್ಟಿನಲ್ಲಿ ನಗದಿರುವ ಜೀವಿಯೇ ಇಲ್ಲ.

ನಗೆಯ ಧ್ವನಿ ವಿಚಿತ್ರ. ಆ ವಿಚಿತ್ರ ನಗೆಯಲ್ಲಿ ವಿವಿಧ ಸ್ವರಗಳನ್ನು ಗುರುತಿಸಬಹುದು. ಕೆಲವರು ನಗುವಾಗ ದಡಬಡ ಸಪ್ಪಳ ಕೇಳಿಬರುತ್ತದೆ. ಕೆಲವರು ನಗುವಾಗ ಕೋಳಿಯಂತೆ ಕ್ಲಕ್–ಕ್ಲಕ್ ಎಂದು ನಿನಾದ ಮಾಡುವುದುಂಟು. ಕೆಲವರ ನಗೆಯಲ್ಲಿ ಹದ್ದಿನ ಸ್ವರ ಕೇಳಿಬರುತ್ತದೆ. ಬಂಡೆಗಲಿನ ಮೇಲೆ ನೀರು ಹರಿದಂತೆ ಗುಳುಗುಳು ಧ್ವನಿಯೊಡನೆ ನಗುವವರೂ ಇದ್ದಾರೆ. ಕೆಲವರ ನಗೆ ಕುದುರೆ ಹೇಂಕರಿಸಿದಂತೆ, ಹಲವರದು ಹಂದಿ ಹೂಂಕರಿಸಿದಂತೆ. ಇನ್ನೂ ಕೆಲವರದು ದಮ್ಮು ರೋಗಿ ಉಸಿರಾಡಿದಂತೆ; ಅತ್ತಂತೆ ನಗುವವರೂ ಇದ್ದಾರೆ. ಸಾಮಾನ್ಯವಾಗಿ ಜಗತ್ತಿನಲ್ಲಿ ಕೇಳಿಬರುವ ಸರ್ವಸ್ವರಗಳೂ ನಗೆಯಲ್ಲಿ ವ್ಯಕ್ತವಾಗುತ್ತವೆ. ನಕ್ಕಾಗ ಮುಖ ಅರಳುತ್ತದೆ. ತುಟಿಯ ಕವಾಟ ತೆರೆಯುತ್ತದೆ. ದಾಳಿಂಬದ ಬೀಜದಂತಿರುವ ಹಲ್ಲುಗಳು ಶುಭ್ರ ಪ್ರಕಾಶ ಬೀರುತ್ತವೆ. ಹಲ್ಲು ಇಲ್ಲದವರ ಗತಿಯೇನು ? ಹಲ್ಲಿಲ್ಲದ ಬಾಯಿ ಇಲಿಯ ಬಿಲದಂತೆ. ನಕ್ಕಾಗ ಗಲ್ಲಗಳೆರಡೂ ಉಬ್ಬಿ ಕಿತ್ತಳೆ ಹಣ್ಣಿನಂತಾಗುತದೆ. ಹೃದಯ ಉಕ್ಕಿ ಬಂದು ಸ್ವರ ಗದ್ಗದಿತವಾಗುತ್ತದೆ. ಮೂಕದನಿ ಮುಗಿಲಿಗೇರುವುದು. ನಕ್ಕಷ್ಟೂ ನಗೆ ಹೆಚ್ಚಾಗುವುದು. ನವಿರು ನವಿರಾಗಿ ಹೊರಬರುವ ನಗೆಯ ಪದರು ಅಗಣಿತ ಅನಂತ.

*ಪ್ರಶ್ನೆಗಳು :*

ಅ) ನಕ್ಕಾಗ ಮುಖದಲ್ಲಿ ಆಗುವ ಬದಲಾವಣೆಗಳನ್ನು ತಿಳಿಸಿ.

ಆ) ನಗೆಯಿಂದ ಹೊರಡುವ ವಿವಿಧ ಸ್ವರಗಳು ಯಾವುವು ?

## ವಿಭಾಗ – 'ಬಿ'

### (ಅನ್ವಯಿಕ ವ್ಯಾಕರಣ, ಅಲಂಕಾರ ಹಾಗೂ ಛಂದಸ್ಸು)

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ :** 10 × 1 = 10

31. 'ಜಿನಾಲಯ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

(ಎ) ವೃದ್ಧಿ ಸಂಧಿ (ಬಿ) ಸವರ್ಣದೀರ್ಘ ಸಂಧಿ

(ಸಿ) ಯಣ್ ಸಂಧಿ (ಡಿ) ಅನುನಾಸಿಕ ಸಂಧಿ

32. 'ಮಾಡು' ಧಾತುವಿನ ಸಂಭಾವನಾರ್ಥಕ ರೂಪ

(ಎ) ಮಾಡಲಿ (ಬಿ) ಮಾಡನು

(ಸಿ) ಮಾಡಿಯಾನು (ಡಿ) ಮಾಡುವನು

33. 'ಕರ್ಮಧಾರಯ' ಸಮಾಸಕ್ಕೆ ಉದಾಹರಣೆಯಾದ ಪದ

(ಎ) ಗಾಂಡೀವಿ (ಬಿ) ಸಾಕ್ಷಿಮಾಡಿ

(ಸಿ) ಧನಹರಣ (ಡಿ) ಪೆರ್ಮರ

34. ಒಂದು ಪೂರ್ಣ ಕ್ರಿಯೆಯಿಂದ ಕೂಡಿದ ವಾಕ್ಯದ ಕೊನೆಯಲ್ಲಿ ಈ ಚಿಹ್ನೆಯನ್ನು ಬಳಸಬೇಕು

(ಎ) ಪೂರ್ಣ ವಿರಾಮ (ಬಿ) ಅಲ್ಪ ವಿರಾಮ

(ಸಿ) ಅರ್ಧ ವಿರಾಮ (ಡಿ) ಭಾವಸೂಚಕ

35. ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನಗಳಾಗಿದ್ದರೆ ಅಂಥಹ ವಾಕ್ಯವನ್ನು ಹೀಗೆಂದು ಕರೆಯುತ್ತೇವೆ

(ಎ) ಸಾಮಾನ್ಯ ವಾಕ್ಯ (ಬಿ) ಮಿಶ್ರ ವಾಕ್ಯ

(ಸಿ) ಸಂಯೋಜಿತ ವಾಕ್ಯ (ಡಿ) ಪ್ರಶ್ನಾರ್ಥಕ ವಾಕ್ಯ

36. ಕ್ರಿಯಾಪದದ ಸ್ಥಾನದಲ್ಲಿದ್ದು ವಾಕ್ಯದ ಅರ್ಥವನ್ನು ಪೂರ್ಣಗೊಳಿಸುವ ಅವ್ಯಯಗಳನ್ನು ಹೀಗೆಂದು ಕರೆಯಲಾಗಿದೆ

(ಎ) ಭಾವಸೂಚಕಾವ್ಯಯ (ಬಿ) ಅನುಕರಣಾವ್ಯಯ

(ಸಿ) ಕ್ರಿಯಾರ್ಥಕಾವ್ಯಯ (ಡಿ) ಸಂಬಂಧಾರ್ಥಕಾವ್ಯಯ

37. 'ಬಲಗಾಲಿನಿಂದ' ಎಂಬ ಪದದಲ್ಲಿರುವ ವಿಭಕ್ತಿ

(ಎ) ಪ್ರಥಮಾ (ಬಿ) ಸಪ್ತಮೀ

(ಸಿ) ಪಂಚಮೀ (ಡಿ) ತೃತೀಯಾ

38. 'ಪೂಜಾರಿ' ಪದವು ನಾಮಪದದ ಈ ಗುಂಪಿಗೆ ಸೇರುತ್ತದೆ

(ಎ) ರೂಢನಾಮ (ಬಿ) ಭಾವನಾಮ

(ಸಿ) ಅಂಕಿತನಾಮ (ಡಿ) ಅನ್ವರ್ಥನಾಮ

39. 'ಅಬ್ಜೋದರ' ಪದದ ಅರ್ಥ

(ಎ) ವಿಷ್ಣು (ಬಿ) ಬ್ರಹ್ಮ

(ಸಿ) ಶಿವ (ಡಿ) ರಾಮ

40. 'ಕೃದಂತ ಭಾವನಾಮ' ಪದಕ್ಕೆ ಉದಾಹರಣೆ

(ಎ) ಓಡಿ (ಬಿ) ಓಡಿದ

(ಸಿ) ಓಟ (ಡಿ) ಓಡುವ

**ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** $4 \times 1 = 4$

41. ಸತಿಪತಿ : ಜೋಡುನುಡಿ :: ಮೆಲ್ಲಮೆಲ್ಲನೆ : ......................... .

42. ಜಮೀನು : ಫಾರ್ಸಿ :: ತಂಬಾಕು : ......................... .

43. ವೈಶಾಖ : ಬೇಸಗೆ :: ಕೋಕಿಲಾ : ......................... .

44. ಜಾಣತನ : ತದ್ಧಿತಾಂತ ಭಾವನಾಮ :: ಬಳೆಗಾರ : ......................... .

45. **ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** $1 \times 3 = 3$

ಏನು ಹೇಳೈ ಕರ್ಣ ಚಿತ್ತ
ಗ್ಲಾನಿ ಯಾವುದು ಮನಕೆ ಕುಂತೀ
ಸೂನುಗಳ ಬೆಸಕೈಸಿಕೊಂಬುದು ಸೇರದೇ ನಿನಗೆ

***ಅಥವಾ***

ನೀನುಳ್ಳೊಡೆಲ್ಲರೊಳರೆಮ
ಗೇನುಮಟಿಲ್ ಮನದೊಳಿಲ್ಲದೆಂತೆನೆ ಮಗನೇ ।

46. **ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** $1 \times 3 = 3$

"ಸತಿಪತಿಗಳೊಂದಾಗದವನ ಭಕ್ತಿ ಅಮೃತದೊಳು ವಿಷ ಬೆರೆದಂತೆ"

***ಅಥವಾ***

"ಅಳ್ಳಿರಿಯುತಿಪ್ಪ ಎಮ್ಮ ಒಡಲ ಬೇಗೆಯ ಬೆಂಕಿಯುರಿ ನಿನ್ನನಿರಿಯದೆ ಪೇಳು ವಿಶ್ವಾಮಿತ್ರ"

## ವಿಭಾಗ – 'ಸಿ'

## (ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲ)

47. **ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ *ಒಂದನ್ನು* ವಿಸ್ತರಿಸಿ ಬರೆಯಿರಿ :** $1 \times 3 = 3$

* ಅತಿಯಾಸೆ ಗತಿಕೇಡು
* ಹೆತ್ತತಾಯಿ, ಹೊತ್ತನಾಡು ಸ್ವರ್ಗಕ್ಕಿಂತಲೂ ಮಿಗಿಲು
* ಮಾತು ಬಲ್ಲವನಿಗೆ ಜಗಳವಿಲ್ಲ; ಊಟ ಬಲ್ಲವನಿಗೆ ರೋಗವಿಲ್ಲ.

48. ನಿಮ್ಮನ್ನು ಮೈಸೂರಿನ ದೇವಲಾಪುರ ಸರ್ಕಾರಿ ಪ್ರೌಢಶಾಲೆಯ 'ವಿದ್ಯಾಶಂಕರ' ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ಆಚರಿಸಿದ 'ವಿಜ್ಞಾನ ವಸ್ತುಪ್ರದರ್ಶನ' ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ 'ದಿಗ್ವಿಜಯ' ದಿನಪತ್ರಿಕೆಯ ಸಂಪಾದಕರಿಗೆ ಒಂದು ಮನವಿ ಪತ್ರ ಬರೆಯಿರಿ. $1 \times 5 = 5$

***ಅಥವಾ***

ನಿಮ್ಮನ್ನು ಮೈಸೂರಿನ ಮೊರಾರ್ಜಿ ಶಾಲೆಯ ವಿದ್ಯಾರ್ಥಿನಿ 'ಸಹನ' ಎಂದು ಭಾವಿಸಿಕೊಂಡು ಚಾಮರಾಜನಗರದ ಶಂಕರಪುರ ಬಡಾವಣೆಯಲ್ಲಿ ವಾಸವಾಗಿರುವ 'ಶೋಭಾರಾಣಿ' ಎಂಬ ಹೆಸರಿನ ತಾಯಿಯವರಿಗೆ ನಿಮ್ಮ ಪರೀಕ್ಷಾ ಸಿದ್ಧತೆ ಕುರಿತು ಒಂದು ಪತ್ರ ಬರೆಯಿರಿ.

49. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ *ಒಂದನ್ನು* ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ :** $1 \times 5 = 5$

* ಶಿಕ್ಷಣಾಭಿವೃದ್ಧಿಯಲ್ಲಿ ಆಧುನಿಕ ತಂತ್ರಜ್ಞಾನದ ಮಹತ್ವ
* ರಾಷ್ಟ್ರೀಯ ಹಬ್ಬಗಳ ಆಚರಣೆಯ ಮಹತ್ವ
* ಜಲಮಾಲಿನ್ಯ ಮತ್ತು ಪರಿಹಾರೋಪಾಯಗಳು

**C**

**SL. No. : XX**

ಒಟ್ಟು ಪ್ರಶ್ನೆಗಳ ಸಂಖ್ಯೆ : 64 ]
Total No. of Questions : 64 ]

**CCE PF**
**CCE PR**
**REVISED**

[ ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 8
[ Total No. of Printed Pages : 8

**ಸಂಕೇತ ಸಂಖ್ಯೆ : 01-K**

**Code No. : 01-K**

# ವಿಷಯ : ಪ್ರಥಮ ಭಾಷೆ — ಕನ್ನಡ

# Subject : First Language — KANNADA

**(ಹೊಸ ಪಠ್ಯಕ್ರಮ / New Syllabus)**

**(ಖಾಸಗಿ ಅಭ್ಯರ್ಥಿ & ಪುನರಾವರ್ತಿತ ಖಾಸಗಿ ಅಭ್ಯರ್ಥಿ / Private Fresh & Private Repeater)**

ದಿನಾಂಕ : 21. 03. 2019 ]
[ Date : 21. 03. 2019

ಸಮಯ : ಬೆಳಗ್ಗೆ 9-30 ರಿಂದ 12-45 ರವರೆಗೆ ]
[ Time : 9-30 A.M. to 12-45 P.M.

ಗರಿಷ್ಠ ಅಂಕಗಳು : 125 ]
[ Max. Marks : 125

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು 64 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

ಇಲ್ಲಿ ಕತ್ತರಿಸಿ

**TEAR HERE TO OPEN THE QUESTION PAPER**
**ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ**

**Tear here**

## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪಠ್ಯಪೂರಕ ಅಧ್ಯಯನ)

**ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ *ಒಂದೊಂದು* ವಾಕ್ಯದಲ್ಲಿ ಉತ್ತರ ಬರೆಯಿರಿ :** $16 \times 1 = 16$

1. ರಾಹಿಲನು ತುರ್ತುಪರಿಸ್ಥಿತಿ ನಿರ್ವಹಣೆಗೆ ಭದ್ರವಾಗಿ ಹಿಡಿದುಕೊಂಡಿದ್ದೇನು ?
2. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು ?
3. ಲಂಡನ್ನಿನಲ್ಲಿ ನೆಲ್ಸನ್‌ರವರ ಮೂರ್ತಿಯಿರುವ ಸ್ಥಳದ ಹೆಸರೇನು ?
4. 'ಶಿವಾನುಭವ ಶಬ್ದಕೋಶ' ಪುಸ್ತಕ ಬರೆದವರು ಯಾರು ?
5. ಶಾನುಭೋಗರ ಬ್ರಹ್ಮಾಸ್ತ್ರ ಯಾವುದು ?
6. ಸುಕುಮಾರಸ್ವಾಮಿಗೆ ಯಾವ ಪಟ್ಟವನ್ನು ಕಟ್ಟಲಾಯಿತು ?
7. ನದೀಜಲಗಳು ಏನಾಗಿವೆ ?
8. ಕವಿ ಬೇಂದ್ರೆಯವರ ಪ್ರಕಾರ ಹಕ್ಕಿಯ ಕಣ್ಣುಗಳು ಯಾವುವು ?
9. ಅಶ್ವಿನಿ ದೇವತೆಗಳ ವರಬಲದಿಂದ ಜನಿಸಿದವರು ಯಾರು ?
10. ಕರ್ಣನು ಕೃಷ್ಣನಿಗೆ ತಾನು ಯಾವ ಸಿರಿಗೆ ಸೋಲುವವನಲ್ಲ ಎಂದನು ?
11. ಆಶ್ವಯುಜದ ಬತ್ತದ ಗದ್ದೆಯ ಬಣ್ಣ ಯಾವ ಹಸುರಿನಂತಿದೆ ?
12. ಕವಿ ಕುವೆಂಪುರವರು ನೋಡಿದ ಅಡಿಕೆಯ ತೋಟ ಎಲ್ಲಿದೆ ?
13. ದಿನಪಸುತ ಎಂದರೆ ಯಾರು ?
14. ದ್ರೋಣನು ಯಾರೊಡನೆ ಪರಶುರಾಮನ ಬಳಿಗೆ ಬಂದನು ?
15. ಪುಟ್ಟ ಪೋರಿಯ ಅಮ್ಮ ಎಲ್ಲಿ ಮಲಗಿದ್ದಾಳೆ ?
16. ಹಾಲುಗಲ್ಲದ ಹಸುಳೆ ಏನು ಮಾಡುತ್ತಿದ್ದಾಳೆ ?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $16 \times 2 = 32$

17. ಪೂಲವರ್ಥ ಅಂಗಡಿಯಲ್ಲಿ ಸಿಗುವ ವಸ್ತುಗಳಾವುವು ?
18. ಲಂಡನ್ನಿನ ಹೆಣ್ಣು ಮಕ್ಕಳು ಯಾವ ಯಾವ ಕೆಲಸದಲ್ಲಿ ನಿಯುಕ್ತರಾಗಿರುತ್ತಾರೆ ?
19. ಅಶೋಕ ಪೈ ಅವರು ಹೇಳಿದ ಸಂಶೋಧನಾ ಸತ್ಯವೇನು ?
20. ಶಾನುಭೋಗರು ಮೂರ್ಛೆಯಲ್ಲಿದ್ದಾಗ ನಡೆದ ಘಟನೆಯನ್ನು ಸಂಕ್ಷಿಪ್ತವಾಗಿ ತಿಳಿಸಿ.
21. ಮದಲಿಂಗನ ಕಣಿವೆಯಲ್ಲಿ ಬರುವಾಗ ಶಾನುಭೋಗರು ಏನೆಂದು ಯೋಚಿಸಿದರು ?
22. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯನ್ನು ನೀಡಿದನು ?
23. ವೃಷಭಾಂಕನು ಸುಕುಮಾರಸ್ವಾಮಿಗೆ ವ್ಯಾಧಿಯಿದೆ ಎಂದುಕೊಳ್ಳಲು ಕಾರಣವೇನು ?

24. ಸುಕುಮಾರಸ್ವಾಮಿಯು ಹೇಗೆ ಸುಖಭೋಗಗಳನ್ನು ಅನುಭವಿಸುತ್ತಿದ್ದನು ?

25. ಕವಿ ಕುವೆಂಪು ಅವರಿಗೆ ಆಗಸದಿಂದ ಸಂಜೆಯ ಬಿಸಿಲವರೆಗೂ ಎಲ್ಲೆಲ್ಲಿ ಹಸುರು ಕಂಡುಬಂದಿದೆ ?

26. ವಾಲ್ಮೀಕಿ ಆಶ್ರಮಕ್ಕೆ ಯಜ್ಞಾಶ್ವವು ಬಂದ ಬಗೆಯನ್ನು ತಿಳಿಸಿ.

27. ದ್ರೋಣನು ಶಪಥ ಮಾಡುವಾಗ ಹೇಳಿದ ಮಾತುಗಳಾವುವು ?

28. ಪರಶುರಾಮನು ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು ?

29. ವಿವೇಕಾನಂದರು ಏಕೆ ಧಾರ್ಮಿಕ ಮೂಲಭೂತವಾದಕ್ಕೆ ಉಗ್ರ ವಿರೋಧಿಯಾಗಿದ್ದರು ?

30. ಭಗತ್‌ಸಿಂಗ್ ತನಗೆ ಪ್ರಿಯವಾದ ಮಾವಿನ ಹಣ್ಣೊಂದನ್ನು ನಿರಾಕರಿಸಿದ್ದಕ್ಕೆ ಕಾರಣ ಹೇಗೆ ತಿಳಿಯಿತು ?

31. ವರ್ತಕನು ನಗರದಿಂದ ಹಳ್ಳಿಗೆ ಹೋಗಬೇಕಾಗಿ ಬಂದ ಸಂದರ್ಭವನ್ನು ತಿಳಿಸಿ.

32. 'ಉಪ್ಪು' ಎಂಬ ಉತ್ತರ ಬರಲು ಹೇಳಿದ ಒಗಟನ್ನು ಬರೆಯಿರಿ.

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** 6 × 3 = 18

33. "ಬೆಳಕಿಗೊಲಿದವರ್ ಉರಿವ ಬತ್ತಿಯ ಕರುಕ ಕಾಣರು"

34. "ಹಾಗಾದರೆ ಎಲ್ಲರಿಗೂ ಮನೆ ಆಗುವವರೆಗೆ ನನಗೂ ಮನೆ ಬೇಡ"

35. "ಪ್ರಕೃತಿ ವಿಕೃತಿಯಾದ ಮನುಷ್ಯನಾಯುಷ್ಯಂ ಕುಂದುಗುಂ"

36. "ಎಲ್ಲ ಜನರಿಗೆ ಜೋರ ಮಾಡಿ ಕಸಿದು ಕೊಳ್ಳಿರಿ ಹತಾರ"

37. "ಕೆಟ್ಟು ವರ್ಣಿಸಿ ಹೇಳಿದೆ ಕಂಡಷ್ಟು"

38. "ತನ್ನ ಮಾತೆಯಂ ಸರ್ವಜನಮುಂ ಬಂಜೆಯೆನ್ನದಿರ್ದಪುದೆ"

**ಈ ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** 2 × 3 = 6

39. ಸಾರಾ ಅಬೂಬಕ್ಕರ್

40. ಕುಮಾರವ್ಯಾಸ

41. **ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** 1 × 4 = 4

ನೀಲಮೇಘ ........................................................

...................................................................

...................................................................

...................................................................

.................................... ಹಾರುತಿದೆ ನೋಡಿದಿರಾ ?

***ಅಥವಾ***

ಯುಗ–ಯುಗಗಳ ..............................................

..............................................................

..............................................................

..............................................................

.................................. ಹಾರುತಿದೆ ನೋಡಿದಿರಾ ?

42. **ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** 1 × 4 = 4

ನಿಮಗೆ ಪೊಡೆಮಟ್ಟು ಪೋಪೀ ।

ಸಮಕಟ್ಟಿಂ ಬಂದೆನಹಿತರೊಳ್ ಸಂಧಿಯನೇಂ ॥

ಸಮಕೊಳಿಸಲೆಂದು ಬಂದೆನೆ ।

ಸಮರದೊಳೆನಗಜ್ಜ ಪೇಟೆಮಾವುದು ಕಜ್ಜಂ ॥

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** 2 × 4 = 8

43. ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.

***ಅಥವಾ***

ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಸ್ಥಾಪಿಸಲಾದ 'ಪ್ರಜಾಪ್ರತಿನಿಧಿ ಸಭೆ' ಹಾಗೂ 'ನ್ಯಾಯ ವಿಧಾಯಕ ಸಭೆ'ಯನ್ನು ಕುರಿತು ವಿವರಿಸಿ.

44. ನಾವು ಯಾವ ಸಂಕಲ್ಪ ಕೈಗೊಳ್ಳಬೇಕೆಂಬುದು ಕವಿ ಶಿವರುದ್ರಪ್ಪನವರ ಆಶಯವಾಗಿದೆ ? ವಿವರಿಸಿ.

***ಅಥವಾ***

ಸಂಕಲ್ಪ ಮತ್ತು ಅನುಷ್ಠಾನದ ಕುರಿತು ಕವಿ ಶಿವರುದ್ರಪ್ಪನವರ ಅಭಿಪ್ರಾಯವನ್ನು ವಿವರಿಸಿ.

45. **ಈ ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :** 2 × 2 = 4

ಯುದ್ಧ, ಇತಿಹಾಸದುದ್ದಕ್ಕೂ ತನ್ನ ಇರುವಿಕೆಯನ್ನು ತೋರಿಸುತ್ತಾ ಬಂದಿದೆ. ಯಾವುದೇ ಸಾಮ್ರಾಜ್ಯದ ಏಳುಬೀಳುಗಳಲ್ಲಿ ಅದು ಪ್ರಮುಖ ಪಾತ್ರವಹಿಸಿದೆ. ಯುದ್ಧ ನಡೆಯಲು ಕಾರಣಗಳು ಹಲವು. ಸಾಮ್ರಾಜ್ಯ ವಿಸ್ತರಣೆ, ಲೋಭ, ವೀರತೆಯ ಪ್ರದರ್ಶನ ಒಂದು ಕಡೆಯಾದರೆ, ಕುಟುಂಬ ಕಲಹಗಳೂ ಯುದ್ಧಕ್ಕೆ ನಾಂದಿ ಹಾಡಿದ ಘಟನೆಗಳು ದಾಖಲಾಗಿವೆ. ಸುಮಾರು ಐದು ಸಾವಿರ ವರ್ಷಗಳ ಹಿಂದೆ ನಡೆದ ಕುರುಕ್ಷೇತ್ರ ಯುದ್ಧ ಇದಕ್ಕೆ ಸ್ಪಷ್ಟ ನಿದರ್ಶನ. ಕುರುವಂಶದ ರಾಜಕುಮಾರರ ಅಂತಃಕಲಹ ಐವತ್ತು ಲಕ್ಷ ಜನರ ಪ್ರಾಣಹಾನಿಯೊಂದಿಗೆ ಪರ್ಯವಸಾನವಾಯಿತು. ಐತಿಹ್ಯದಂತೆ ಕೇವಲ ಹದಿನೆಂಟು ದಿನ ನಡೆದ ಈ ಯುದ್ಧ, ಕಂಡ ಪರಿಣಾಮ ಅತ್ಯಂತ ಘೋರ.

ಭಾರತ ತನ್ನ ಇತಿಹಾಸದಲ್ಲಿ ಕಂಡ ಅತ್ಯಂತ ವರ್ಣರಂಜಿತ ವ್ಯಕ್ತಿತ್ವ ಕೌಟಿಲ್ಯನದು. ತನ್ನ ಹಠದ ಪಟ್ಟನ್ನು ಸಡಿಲಿಸದೆ, ಮನೋನಿಶ್ಚಯದಂತೆ ಅಪೂರ್ವಕುಶಲತೆಯನ್ನು ತೋರಿದ ಪ್ರತಿಭಾವಂತನೀತ. ಸರಳ ತಂತ್ರೋಪಾಯಗಳಿಂದ ಚಂದ್ರಗುಪ್ತನ ಶತ್ರುಬಲವನ್ನು ನಿರಾವಲಂಬನಗೊಳಿಸಿ ಮೌರ್ಯ ವಂಶದ ಸ್ಥಾಪನೆಗೆ ಮಾರ್ಗದರ್ಶಕನಾಗುತ್ತಾನೆ. ತನ್ನನ್ನೇ ಹಿಂಬಾಲಿಸಿ ಬಂದ ರಾಜ್ಯಲಕ್ಷ್ಮೀ, ಅಧಿಕಾರಗಳನ್ನು ದೂರೀಕರಿಸಿ ವಿರಕ್ತನಂತೆ ಆಶ್ರಮವಾಸಿಯಾಗುತ್ತಾನೆ. ಚಾಣಕ್ಯನ ಪ್ರಕಾರ ಯುದ್ಧದಲ್ಲಿ ಮೂರು ವಿಧಗಳು. ಮೊದಲನೆಯದು ಪ್ರಕಾಶಯುದ್ಧ – ಸೂಚಿತ ಸ್ಥಳದಲ್ಲಿ ನಿರ್ದಿಷ್ಟ ಸಮಯಕ್ಕೆ ನಡೆಯುವ ಸಂಗ್ರಾಮ. ಎರಡನೆಯದು ಕೂಟಯುದ್ಧ – ತಂತ್ರಗಳ ಮೂಲಕ ಯುದ್ಧ ಮಾಡುವುದು. ಮೂರನೆಯದು ಮೌನಯುದ್ಧ – ಶತ್ರು ಅಧಿಕಾರಿಗಳನ್ನು ನಾಶಪಡಿಸಲು ಗುಪ್ತ ಕಾರ್ಯಾಚರಣೆ ನಡೆಸುವುದು. ಯಾವಾಗ ರಾಜ ಶತ್ರುಗಳಿಗಿಂತ ಬಲಿಷ್ಠನಾಗಿದ್ದು ಪರಿಸ್ಥಿತಿ ಅನುಕೂಲಕರವಾಗಿರುತ್ತದೋ ಆಗ ಅವನು ಮುಕ್ತ ಯುದ್ಧವನ್ನೇ ಮಾಡಬೇಕು. ಸೂಚಿತ ಸ್ಥಳದಲ್ಲಿ, ನಿರ್ದಿಷ್ಟ ಸಮಯದಲ್ಲಿ ನಡೆಯುವ ಮುಕ್ತ ಯುದ್ಧವೇ ಧರ್ಮಯುದ್ಧ.

*ಪ್ರಶ್ನೆಗಳು :*

ಅ) ಚಾಣಕ್ಯನ ಪ್ರಕಾರ ಮೂರು ಬಗೆಯ ಯುದ್ಧಗಳಾವುವು ? ವಿವರಿಸಿ.

ಆ) ಯುದ್ಧಕ್ಕೆ ಕಾರಣವಾದ ಅಂಶಗಳನ್ನು ಒಂದು ನಿದರ್ಶನದೊಂದಿಗೆ ಬರೆಯಿರಿ.

## ವಿಭಾಗ – 'ಬಿ'

### (ಅನ್ವಯಿಕ ವ್ಯಾಕರಣ, ಅಲಂಕಾರ ಹಾಗೂ ಛಂದಸ್ಸು)

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ :** 10 × 1 = 10

46. 'ಸಪ್ತಮೀ' ವಿಭಕ್ತಿ ಪ್ರತ್ಯಯದ ಕಾರಕಾರ್ಥ

(ಎ) ಸಂಬಂಧ (ಬಿ) ಸಂಪ್ರದಾನ

(ಸಿ) ಅಧಿಕರಣ (ಡಿ) ಅಪಾದಾನ

47. 'ವಾಗ್ದೇವಿ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

(ಎ) ಜಶ್ತ್ವ ಸಂಧಿ (ಬಿ) ಶ್ಚುತ್ವ ಸಂಧಿ

(ಸಿ) ಆದೇಶ ಸಂಧಿ (ಡಿ) ಯಣ್ ಸಂಧಿ

48. 'ಮಾಡು' ಧಾತುವಿನ ವಿಧ್ಯರ್ಥಕ ರೂಪ

(ಎ) ಮಾಡಿಯಾನು (ಬಿ) ಮಾಡದು

(ಸಿ) ಮಾಡೀತು (ಡಿ) ಮಾಡಲಿ

49. ಸ್ವತಂತ್ರ ವಾಕ್ಯಗಳಾಗಿ ನಿಲ್ಲಬಲ್ಲ ಅನೇಕ ಉಪವಾಕ್ಯಗಳೊಡನೆ ಒಂದು ಪೂರ್ಣಾಭಿಪ್ರಾಯದ ವಾಕ್ಯವಾಗಿದ್ದರೆ ಅದು

(ಎ) ಸಾಮಾನ್ಯ ವಾಕ್ಯ (ಬಿ) ಸಂಯೋಜಿತ ವಾಕ್ಯ

(ಸಿ) ಮಿಶ್ರ ವಾಕ್ಯ (ಡಿ) ಪ್ರಶ್ನಾರ್ಥಕ ವಾಕ್ಯ

50. ಅನ್ವರ್ಥನಾಮಪದಕ್ಕೆ ಉದಾಹರಣೆಯಾದ ಪದವಿದು

(ಎ) ರಾಹುಲ (ಬಿ) ಪರ್ವತ

(ಸಿ) ಮನುಷ್ಯ (ಡಿ) ವಿಜ್ಞಾನಿ

51. 'ತತ್ಪುರುಷ ಸಮಾಸ'ಕ್ಕೆ ಉದಾಹರಣೆಯಾದ ಪದ

(ಎ) ಬೆಟ್ಟದಾವರೆ (ಬಿ) ಮುಕ್ಕಣ್ಣು

(ಸಿ) ಅಂಗೈ (ಡಿ) ನೆಯ್ದುವಸ್ತ್ರ

52. ಪಾರಿಭಾಷಿಕ ಪದಗಳನ್ನು ಬಳಸುವಾಗ, ಅನ್ಯಭಾಷೆಯ ಪದಗಳನ್ನು ಬಳಸುವಾಗ, ಪ್ರಮುಖ ಪದಗಳನ್ನು ಸೂಚಿಸುವಾಗ ಈ ಚಿಹ್ನೆಯನ್ನು ಬಳಸಲಾಗುವುದು.

(ಎ) ಉದ್ಧರಣ ಚಿಹ್ನೆ (ಬಿ) ಆವರಣ ಚಿಹ್ನೆ

(ಸಿ) ವಾಕ್ಯವೇಷ್ಠನ ಚಿಹ್ನೆ (ಡಿ) ವಿವರಣಾತ್ಮಕ ಚಿಹ್ನೆ

53. ಹಲವು ವಸ್ತುಗಳಲ್ಲಿ ಒಂದನ್ನು ನಿಶ್ಚಯವಾಗಿ ಹೇಳುವ ಸಂದರ್ಭದಲ್ಲಿ ಈ ಅವ್ಯಯವನ್ನು ಬಳಸಲಾಗುತ್ತದೆ.

(ಎ) ಅನುಕರಣಾವ್ಯಯ (ಬಿ) ಕ್ರಿಯಾರ್ಥಕಾವ್ಯಯ

(ಸಿ) ಸಂಬಂಧಾರ್ಥಕಾವ್ಯಯ (ಡಿ) ಅವಧಾರಣಾರ್ಥಕಾವ್ಯಯ

54. 'ಸ್ಯಾನಿಟರಿ' ಪದವು ಕನ್ನಡಕ್ಕೆ ಈ ಭಾಷೆಯಿಂದ ಬಂದಿದೆ

(ಎ) ಹಿಂದೂಸ್ಥಾನಿ (ಬಿ) ಇಂಗ್ಲಿಷ್

(ಸಿ) ಗ್ರೀಕ್ (ಡಿ) ಪೋರ್ಚ್‌ಗೀಸ್

55. ತದ್ಧಿತಾಂತ ಭಾವನಾಮಕ್ಕೆ ಉದಾಹರಣೆಯಾಗುವ ಪದವಿದು

(ಎ) ಬಳೆಗಾರ (ಬಿ) ಚಂದ್ರನಂತೆ

(ಸಿ) ಕಪ್ಪು (ಡಿ) ಸಿರಿವಂತ

**ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** $4 \times 1 = 4$

56. ಹಾಲ್ಜೇನು : ಜೋಡುನುಡಿ :: ಮೊಟ್ಟಮೊದಲು : ......................... .

57. ವಂಧ್ಯಾ : ಬಂಜೆ :: ಕೋಕಿಲಾ : ......................... .

58. ಚಿತ್ತ : ಮನಸ್ಸು :: ಕೈವಾರ : ......................... .

59. ಸಕ್ಕಾರಿ : ಸಕ್ಕರೆ :: ಇಸವಾಸ : ......................... .

60. **ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** $1 \times 3 = 3$

ಕೊರಳ ಸೆರೆ ಹಿಗ್ಗಿದವು ದೃಗುಜಲ

ಉರವಣಿಸಿ ಕಡು ನೊಂದನಕಟಾ

ಕುರುಪತಿಗೆ ಕೇಡಾದುದೆಂದನು ತನ್ನ ಮನದೊಳಗೆ

***ಅಥವಾ***

ಅಂತೆಂಬನಾರ್ಗೆ ಪಿರಿದುಂ

ಭ್ರಾಂತು ದಲೇಂ ದ್ರೋಣನೆಂಬನೇಂ ಪಾರ್ವನೆ ಪೇ

61. **ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** 1 × 3 = 3

"ಭೀಮ ದುರ್ಯೋಧನರು ಮದಗಜಗಳಂತೆ ಹೋರಾಡಿದರು"

***ಅಥವಾ***

ಮಾತು ಬಲ್ಲವನಿಗೆ ಜಗಳವಿಲ್ಲ; ಊಟ ಬಲ್ಲವನಿಗೆ ರೋಗವಿಲ್ಲ.

## ವಿಭಾಗ – 'ಸಿ'

## (ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲ)

62. **ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ *ಒಂದನ್ನು* ವಿಸ್ತರಿಸಿ ಬರೆಯಿರಿ :** 1 × 3 = 3

* ಹೆತ್ತತಾಯಿ, ಹೊತ್ತನಾಡು ಸ್ವರ್ಗಕ್ಕಿಂತ ಮಿಗಿಲು
* ಚಿಂತೆಯೇ ಮುಪ್ಪು; ಸಂತೋಷವೇ ಯೌವನ
* ದೇಶ ನೋಡು; ಕೋಶ ಓದು

63. ನಿಮ್ಮನ್ನು ಸರಗೂರಿನ ಕಾವೇರಿ ಪ್ರೌಢಶಾಲೆಯ 'ಪ್ರಕೃತಿ' ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ಆಚರಿಸಿದ 'ಕನ್ನಡ ರಾಜ್ಯೋತ್ಸವ' ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ 'ವಿಜಯವಾಣಿ' ದಿನಪತ್ರಿಕೆಯ ಸಂಪಾದಕರಿಗೆ ಒಂದು ಮನವಿ ಪತ್ರ ಬರೆಯಿರಿ. 1 × 5 = 5

***ಅಥವಾ***

ನಿಮ್ಮನ್ನು ಮಂಡ್ಯದ ಅನಿಕೇತನ ಪ್ರೌಢಶಾಲೆಯ 'ಪ್ರಾರ್ಥನಾ' ಎಂದು ಭಾವಿಸಿಕೊಂಡು ನಿಮ್ಮ ವಿದ್ಯಾಭ್ಯಾಸದ ಪ್ರಗತಿಯನ್ನು ಕುರಿತು ಭದ್ರಾವತಿಯ ನೇತಾಜಿನಗರದಲ್ಲಿ ವಾಸವಾಗಿರುವ 'ವನಿತ' ಎಂಬ ಹೆಸರಿನ ತಾಯಿಯವರಿಗೆ ಒಂದು ಪತ್ರ ಬರೆಯಿರಿ.

64. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ *ಒಂದನ್ನು* ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ :** 1 × 5 = 5

* ಜನಸಂಖ್ಯಾ ಸ್ಫೋಟಕ್ಕೆ ಕಾರಣ ಹಾಗೂ ಪರಿಹಾರೋಪಾಯ
* ರಾಷ್ಟ್ರೀಯ ಭಾವೈಕ್ಯತೆ
* ಜಾಗತಿಕ ತಾಪಮಾನ ಹೆಚ್ಚಳದಿಂದಾಗುವ ದುಷ್ಪರಿಣಾಮ ಹಾಗೂ ಪರಿಹಾರಗಳು

**D**

SL. No. : XX

ಒಟ್ಟು ಪ್ರಶ್ನೆಗಳ ಸಂಖ್ಯೆ : 64 ]
Total No. of Questions : 64 ]

**CCE PR**
**UN-REVISED**

[ ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 8
[ Total No. of Printed Pages : 8

**ಸಂಕೇತ ಸಂಖ್ಯೆ : 01-K** | **Code No. : 01-K**

# ವಿಷಯ : ಪ್ರಥಮ ಭಾಷೆ — ಕನ್ನಡ

# Subject : First Language — KANNADA

**( ಹಳೆ ಪಠ್ಯಕ್ರಮ / Old Syllabus )**

**( ಪುನರಾವರ್ತಿತ ಖಾಸಗಿ ಅಭ್ಯರ್ಥಿ / Private Repeater )**

ದಿನಾಂಕ : 21. 03. 2019 ] | [ Date : 21. 03. 2019

ಸಮಯ : ಬೆಳಗ್ಗೆ 9-30 ರಿಂದ 12-45 ರವರೆಗೆ ] | [ Time : 9-30 A.M. to 12-45 P.M.

ಗರಿಷ್ಠ ಅಂಕಗಳು : 125 ] | [ Max. Marks : 125

***ಪರೀಕ್ಷಾರ್ಥಿಗಳಿಗೆ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು 64 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

ಇಲ್ಲಿ ಕತ್ತರಿಸಿ

**TEAR HERE TO OPEN THE QUESTION PAPER**
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

**Tear here**

## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪೋಷಕ ಅಧ್ಯಯನ)

**ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ *ಒಂದೊಂದು* ವಾಕ್ಯದಲ್ಲಿ ಉತ್ತರ ಬರೆಯಿರಿ :** 16 × 1 = 16

1. ಅಮೆರಿಕ, ಕೆನಡಾ ದೇಶಗಳಲ್ಲಿ ಮನೆಗಳನ್ನು ಸಾಧಾರಣವಾಗಿ ಯಾವುದರಿಂದ ಕಟ್ಟಿರುತ್ತಾರೆ ?
2. ಧರ್ಮಗಳು ಹಾಕಿಕೊಟ್ಟಿರುವ ರತ್ನಪಾಠ ಏನು ?
3. ಬುಕ್ಕರಾಯನ ರಾಜ್ಯಭಾರ ಕಾಲದಲ್ಲಿ ಯಾರ ಯಾರೊಳಗೆ ಸಂವಾದ ನಡೆಯಿತು ?
4. ವಿಶ್ವೇಶ್ವರಯ್ಯರವರನ್ನು ದಿವಾನರಾಗಿ ನೇಮಿಸಿದವರು ಯಾರು ?
5. ಮನೆಮಂಚಮ್ಮನ ಕತೆ ಹೇಳಿದ ಕವಿ ಯಾರು ?
6. ಶಾನುಭೋಗರ ಬ್ರಹ್ಮಾಸ್ತ್ರ ಯಾವುದು ?
7. ಘಟ ಸಂಭೂತ ಯಾರು ?
8. ಗಾಂಡೀವಿ ಎಂಬ ಬಿರುದಾಂಕಿತರು ಯಾರು ?
9. ಹಕ್ಕಿಯು ಯಾರ ನೆತ್ತಿಯನ್ನು ಕುಕ್ಕಿದೆ ?
10. ಶಿವನಿಗೆ ಯಾರ ಭಕ್ತಿ ಹಿತವೆನಿಸುತ್ತದೆ ?
11. ನದೀಜಲಗಳು ಏನಾಗಿವೆ ?
12. ಅಶ್ವಿನೀದೇವತೆಗಳ ವರಬಲದಿಂದ ಜನಿಸಿದವರು ಯಾರು ಯಾರು ?
13. ದಾಹಗೊಂಡವರ ತನುವ ತಣಿಸಲು ಕವಯಿತ್ರಿ ಇಂದುಮತಿ ಲಮಾಣಿ ಅವರು ಏನಾಗಬಯಸಿದ್ದಾರೆ ?
14. ಅಜ್ಞಾನ ತೊಲಗಿಸಲು ಕವಯಿತ್ರಿ ಏನಾಗ ಬಯಸಿದ್ದಾರೆ ?
15. ಮುದ್ದು ಪಾರಿವಾಳಗಳ ಜೋಡಿ ಎಲ್ಲಿ ಸಂಸಾರ ಹೂಡಿತ್ತು ?
16. ಪಾರಿವಾಳ ಪದ್ಯದಲ್ಲಿ ಸು.ರಂ. ಎಕ್ಕುಂಡಿ ಅವರು ಏನನ್ನು ತೊರೆದು ಬಾಳಬೇಕು ಎಂದಿದ್ದಾರೆ ?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** 16 × 2 = 32

17. ಜೈನಧರ್ಮದ ರಕ್ಷಣೆಗಾಗಿ ಬುಕ್ಕರಾಯನು ಕೈಗೊಂಡ ಕ್ರಮಗಳಾವುವು ?
18. 'ಧರ್ಮಸಮದೃಷ್ಟಿ' ಪಾಠದಲ್ಲಿ ರಾಮಾನುಜಾಚಾರ್ಯರ ಗುಣವಿಶೇಷತೆಯನ್ನು ಹೇಗೆ ಕೊಂಡಾಡಲಾಗಿದೆ ?
19. ಹೈದರಾಬಾದ್ ನಗರದಲ್ಲಿ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಸೇವೆಯನ್ನು ತಿಳಿಸಿ.
20. ಅಶೋಕ ಪೈ ಹೇಳಿದ ಸಂಶೋಧನಾ ಸತ್ಯವೇನು ?
21. 'ವಚನಧರ್ಮ'ದ ಬಗೆಗೆ ದೇವನೂರರ ಅಭಿಪ್ರಾಯ ಏನು ?
22. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯಿತ್ತನು ?

23. ಹುಲಿಯು ಹಿಂದಿನಿಂದ ಹಾರಿ ಕೊಲ್ಲದಿರಲು ಕಾರಣಗಳೇನು ?

24. ಶಾನುಭೋಗರು ಮೂರ್ಛೆಯಲ್ಲಿದ್ದಾಗ ನಡೆದ ಘಟನೆಗಳನ್ನು ವಿವರಿಸಿ.

25. ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು ?

26. ಮಾತಿನ ಮಹತ್ವವನ್ನು ಬಸವಣ್ಣನವರು ಹೇಗೆ ವಿಶ್ಲೇಷಿಸಿದ್ದಾರೆ ?

27. ವಾಲ್ಮೀಕಿ ಆಶ್ರಮಕ್ಕೆ ಯಜ್ಞಾಶ್ವವು ಬಂದ ಬಗೆಯನ್ನು ವಿವರಿಸಿ.

28. ಗಡಿಯ ಆಚೆ–ಈಚೆ ಜೀವಿಗಳು ಏಕೆ ಶವವಾದವು ?

29. ಮೂಢನಂಬಿಕೆಗಳ ಬಗ್ಗೆ ಎಚ್. ನರಸಿಂಹಯ್ಯ ಅವರ ಅಭಿಪ್ರಾಯವನ್ನು ತಿಳಿಸಿ.

30. ಪಂಪನು ವೃಷಭಾಚಲದಲ್ಲಿ ತನ್ನ ಹೆಸರನ್ನು ಏಕೆ ಕೆತ್ತಿಸಲಿಲ್ಲ ?

31. ಅಂದವಾದ ಬರೆವಣಿಗೆಯ ಬಗ್ಗೆ ಗಾಂಧೀಜಿಯವರ ಅಭಿಪ್ರಾಯವೇನು ?

32. 'ತಾವರೆಬೇರು' ಎಂಬ ಉತ್ತರ ಬರುವ ಒಗಟನ್ನು ಬರೆಯಿರಿ.

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** $6 \times 3 = 18$

33. "ನಮ್ಮ ಪುಸ್ತಕದಲ್ಲಿ ಗಾಂಧಿ ಮೇಲೆ ಒಂದು ಪಾಠವಿದೆಯಲ್ಲ"

34. "ತಾವು ಕಡಿಮೆ ಮಾತನಾಡಿದ್ದೀರಿ ಮತ್ತು ಹೆಚ್ಚು ಕೆಲಸ ಮಾಡಿದ್ದೀರಿ"

35. "ಹುಸಿಯದ ಬೇಹಾರಿಯೇ ಇಲ್ಲ"

36. "ನಿಷ್ಠೆಯಿಲ್ಲದ ಭಕ್ತ ಪಟ್ಟಣದಲ್ಲಿದ್ದಡೂ ಅದು ನಟ್ಟಡವಿ"

37. "ಹೊಡೆದರೊ ಗುಂಡ ಕರುಣ ಇಲದ್ಹಂಗ"

38. "ಜಾನಕಿಯ ಮಗನಿದಕೆ ಬೆದರುವನೆ"

**ಈ ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** $2 \times 3 = 6$

39. ವಿ.ಕೃ. ಗೋಕಾಕ್

40. ಆದಿಕವಿ ಪಂಪ

41. **ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** $1 \times 4 = 4$

ನೀಲಮೇಘ ಮಂಡಲ ..........................................

..........................................................................

..........................................................................

..........................................................................

ಹಕ್ಕಿ ಹಾರುತಿದೆ ನೋಡಿದಿರಾ ?

**ಅಥವಾ**

ಯುಗ–ಯುಗಗಳ ..............................................

..............................................................

..............................................................

..............................................................

ಹಕ್ಕಿ ಹಾರುತಿದೆ ನೋಡಿದಿರಾ ?

42. **ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** $1 \times 4 = 4$

ಮಾರಿಗೌತಣವಾಯ್ತು ನಾಳಿನ

ಭಾರತವು ಚತುರಂಗ ಬಲದಲಿ

ಕೌರವನ ಋಣ ಹಿಂಗೆ ರಣದಲಿ ಸುಭಟಕೋಟಿಯನು

ತೀರಿಸಿಯೆ ಪತಿಯವಸರಕ್ಕೆ ಶ

ರೀರವನು ನೂಕುವೆನು ನಿನ್ನಯ

ವೀರರೈವರ ನೋಯಿಸೆನು ರಾಜೀವಸಖನಾಣೆ.

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $2 \times 4 = 8$

43. ಶಬರಿಯ ಚಿಂತೆ ಹಿಂಗಿಹೋದ ಸಂದರ್ಭದ ಸ್ವಾರಸ್ಯವನ್ನು ವಿವರಿಸಿ.

***ಅಥವಾ***

ಶಬರಿಯ ಸಡಗರ, ಸಂತೋಷ ಮೇಳದವರ ಹಾಡಿನಲ್ಲಿ ಹೇಗೆ ವರ್ಣಿತವಾಗಿದೆ ?

44. ನಾವು ಯಾವ ಸಂಕಲ್ಪ ಕೈಗೊಳ್ಳಬೇಕೆಂಬುದು ಕವಿ ಶಿವರುದ್ರಪ್ಪನವರ ಆಶಯವಾಗಿದೆ ?

***ಅಥವಾ***

ಸಂಕಲ್ಪ ಮತ್ತು ಅನುಷ್ಠಾನದ ಕುರಿತು ಜಿ.ಎಸ್. ಶಿವರುದ್ರಪ್ಪನವರ ಅಭಿಪ್ರಾಯವನ್ನು ನಿಮ್ಮ ಮಾತಿನಲ್ಲಿ ವಿವರಿಸಿ.

45. **ಈ ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :** $2 \times 2 = 4$

ಪ್ರಪಂಚ ಸುಖ–ದುಃಖಗಳ ಆಗರ. ಕೇವಲ ಸುಖ, ಕೇವಲ ದುಃಖ ಯಾವ ಪ್ರಾಣಿ ಜೀವನದಲ್ಲಿಯೂ ಇಲ್ಲ. ಸುಖ–ದುಃಖಗಳಿಗೆ ಮನವೇ ಮೂಲ. ನಗೆ ವಿಶ್ವವ್ಯಾಪಕ. ಅದು ಸ್ವರ್ಗ, ಮರ್ತ್ಯ, ಪಾತಾಳ ಲೋಕಗಳಲ್ಲೆಲ್ಲ ಹಬ್ಬಿಕೊಂಡಿದೆ. ದೇವಾನುದೇವತೆಗಳೂ, ಮಾನವರೂ, ಪ್ರಾಣಿಗಳೂ ನಗುತ್ತವೆ. ಒಟ್ಟಿನಲ್ಲಿ ನಗದಿರುವ ಜೀವಿಯೇ ಇಲ್ಲ.

ನಗೆಯ ಧ್ವನಿ ವಿಚಿತ್ರ. ಆ ವಿಚಿತ್ರ ನಗೆಯಲ್ಲಿ ವಿವಿಧ ಸ್ವರಗಳನ್ನು ಗುರುತಿಸಬಹುದು. ಕೆಲವರು ನಗುವಾಗ ದಡಬಡ ಸಪ್ಪಳ ಕೇಳಿಬರುತ್ತದೆ. ಕೆಲವರು ನಗುವಾಗ ಕೋಳಿಯಂತೆ ಕ್ಲಕ್–ಕ್ಲಕ್ ಎಂದು ನಿನಾದ ಮಾಡುವುದುಂಟು. ಕೆಲವರ ನಗೆಯಲ್ಲಿ ಹದ್ದಿನ ಸ್ವರ ಕೇಳಿಬರುತ್ತದೆ. ಬಂಡೆಗಲ್ಲಿನ ಮೇಲೆ ನೀರು ಹರಿದಂತೆ ಗುಳುಗುಳು ಧ್ವನಿಯೊಡನೆ ನಗುವವರೂ ಇದ್ದಾರೆ. ಕೆಲವರ ನಗೆ ಕುದುರೆ ಹೇಂಕರಿಸಿದಂತೆ, ಹಲವರದು ಹಂದಿ ಹೂಂಕರಿಸಿದಂತೆ. ಇನ್ನೂ ಕೆಲವರದು ದಮ್ಮು ರೋಗಿ ಉಸಿರಾಡಿದಂತೆ; ಅತ್ತಂತೆ ನಗುವವರೂ ಇದ್ದಾರೆ. ಸಾಮಾನ್ಯವಾಗಿ ಜಗತ್ತಿನಲ್ಲಿ ಕೇಳಿಬರುವ ಸರ್ವಸ್ವರಗಳೂ ನಗೆಯಲ್ಲಿ ವ್ಯಕ್ತವಾಗುತ್ತವೆ. ನಕ್ಕಾಗ ಮುಖ ಅರಳುತ್ತದೆ. ತುಟಿಯ ಕವಾಟ ತೆರೆಯುತ್ತದೆ. ದಾಳಿಂಬದ ಬೀಜದಂತಿರುವ ಹಲ್ಲುಗಳು ಶುಭ್ರ ಪ್ರಕಾಶ ಬೀರುತ್ತವೆ. ಹಲ್ಲು ಇಲ್ಲದವರ ಗತಿಯೇನು ? ಹಲ್ಲಿಲ್ಲದ ಬಾಯಿ ಇಲಿಯ ಬಿಲದಂತೆ. ನಕ್ಕಾಗ ಗಲ್ಲಗಳೆರಡೂ ಉಬ್ಬಿ ಕಿತ್ತಳೆ ಹಣ್ಣಿನಂತಾಗುತ್ತದೆ. ಹೃದಯ ಉಕ್ಕಿ ಬಂದು ಸ್ವರ ಗದ್ಗದಿತವಾಗುತ್ತದೆ. ಮೂಕದನಿ ಮುಗಿಲಿಗೇರುವುದು. ನಕ್ಕಷ್ಟೂ ನಗೆ ಹೆಚ್ಚಾಗುವುದು. ನವಿರು ನವಿರಾಗಿ ಹೊರಬರುವ ನಗೆಯ ಪದರು ಅಗಣಿತ ಅನಂತ.

*ಪ್ರಶ್ನೆಗಳು :*

ಅ) ನಕ್ಕಾಗ ಮುಖದಲ್ಲಿ ಆಗುವ ಬದಲಾವಣೆಗಳನ್ನು ತಿಳಿಸಿ.

ಆ) ನಗೆಯಿಂದ ಹೊರಡುವ ವಿವಿಧ ಸ್ವರಗಳು ಯಾವುವು ?

## ವಿಭಾಗ – 'ಬಿ'

## (ಅನ್ವಯಿಕ ವ್ಯಾಕರಣ, ಅಲಂಕಾರ ಹಾಗೂ ಛಂದಸ್ಸು)

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ :** $10 \times 1 = 10$

46. 'ಜಿನಾಲಯ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

(ಎ) ವೃದ್ಧಿ ಸಂಧಿ (ಬಿ) ಸವರ್ಣದೀರ್ಘ ಸಂಧಿ

(ಸಿ) ಯಣ್ ಸಂಧಿ (ಡಿ) ಅನುನಾಸಿಕ ಸಂಧಿ

47. 'ಮಾಡು' ಧಾತುವಿನ ಸಂಭಾವನಾರ್ಥಕ ರೂಪ

(ಎ) ಮಾಡಲಿ (ಬಿ) ಮಾಡನು

(ಸಿ) ಮಾಡಿಯಾನು (ಡಿ) ಮಾಡುವನು

48. 'ಕರ್ಮಧಾರಯ' ಸಮಾಸಕ್ಕೆ ಉದಾಹರಣೆಯಾದ ಪದ

(ಎ) ಗಾಂಡೀವಿ (ಬಿ) ಸಾಕ್ಷಿಮಾಡಿ

(ಸಿ) ಧನಹರಣ (ಡಿ) ಪೆರ್ಮರ

49. ಒಂದು ಪೂರ್ಣ ಕ್ರಿಯೆಯಿಂದ ಕೂಡಿದ ವಾಕ್ಯದ ಕೊನೆಯಲ್ಲಿ ಈ ಚಿಹ್ನೆಯನ್ನು ಬಳಸಬೇಕು

(ಎ) ಪೂರ್ಣ ವಿರಾಮ (ಬಿ) ಅಲ್ಪ ವಿರಾಮ

(ಸಿ) ಅರ್ಧ ವಿರಾಮ (ಡಿ) ಭಾವಸೂಚಕ

50. ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನಗಳಾಗಿದ್ದರೆ ಅಂಥಹ ವಾಕ್ಯವನ್ನು ಹೀಗೆಂದು ಕರೆಯುತ್ತೇವೆ
    (ಎ) ಸಾಮಾನ್ಯ ವಾಕ್ಯ (ಬಿ) ಮಿಶ್ರ ವಾಕ್ಯ
    (ಸಿ) ಸಂಯೋಜಿತ ವಾಕ್ಯ (ಡಿ) ಪ್ರಶ್ನಾರ್ಥಕ ವಾಕ್ಯ
51. ಕ್ರಿಯಾಪದದ ಸ್ಥಾನದಲ್ಲಿದ್ದು ವಾಕ್ಯದ ಅರ್ಥವನ್ನು ಪೂರ್ಣಗೊಳಿಸುವ ಅವ್ಯಯಗಳನ್ನು ಹೀಗೆಂದು ಕರೆಯಲಾಗಿದೆ
    (ಎ) ಭಾವಸೂಚಕಾವ್ಯಯ (ಬಿ) ಅನುಕರಣಾವ್ಯಯ
    (ಸಿ) ಕ್ರಿಯಾರ್ಥಕಾವ್ಯಯ (ಡಿ) ಸಂಬಂಧಾರ್ಥಕಾವ್ಯಯ
52. 'ಬಲಗಾಲಿನಿಂದ' ಎಂಬ ಪದದಲ್ಲಿರುವ ವಿಭಕ್ತಿ
    (ಎ) ಪ್ರಥಮಾ (ಬಿ) ಸಪ್ತಮೀ
    (ಸಿ) ಪಂಚಮೀ (ಡಿ) ತೃತೀಯಾ
53. 'ಪೂಜಾರಿ' ಪದವು ನಾಮಪದದ ಈ ಗುಂಪಿಗೆ ಸೇರುತ್ತದೆ
    (ಎ) ರೂಢನಾಮ (ಬಿ) ಭಾವನಾಮ
    (ಸಿ) ಅಂಕಿತನಾಮ (ಡಿ) ಅನ್ವರ್ಥನಾಮ
54. 'ಅಬ್ಜೋದರ' ಪದದ ಅರ್ಥ
    (ಎ) ವಿಷ್ಣು (ಬಿ) ಬ್ರಹ್ಮ
    (ಸಿ) ಶಿವ (ಡಿ) ರಾಮ
55. 'ಕೃದಂತ ಭಾವನಾಮ' ಪದಕ್ಕೆ ಉದಾಹರಣೆ
    (ಎ) ಓಡಿ (ಬಿ) ಓಡಿದ
    (ಸಿ) ಓಟ (ಡಿ) ಓಡುವ

**ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** $4 \times 1 = 4$

56. ಸತಿಪತಿ : ಜೋಡುನುಡಿ :: ಮೆಲ್ಲಮೆಲ್ಲನೆ : ......................... .
57. ಜಮೀನು : ಫಾರ್ಸಿ :: ತಂಬಾಕು : ......................... .
58. ವೈಶಾಖ : ಬೇಸಗೆ :: ಕೋಕಿಲಾ : ......................... .
59. ಜಾಣತನ : ತದ್ಧಿತಾಂತ ಭಾವನಾಮ :: ಬಳೆಗಾರ : ......................... .
60. **ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** $1 \times 3 = 3$

    ಏನು ಹೇಳೈ ಕರ್ಣ ಚಿತ್ತ
    ಗ್ಲಾನಿ ಯಾವುದು ಮನಕೆ ಕುಂತೀ
    ಸೂನುಗಳ ಬೆಸಕೈಸಿಕೊಂಬುದು ಸೇರದೇ ನಿನಗೆ

    ***ಅಥವಾ***

    ನೀನುಳ್ಳೊಡೆಲ್ಲರೊಳರೆಮ
    ಗೇನುಮಟಿಲ್ ಮನದೊಳಿಲ್ಲದೆಂತೆನೆ ಮಗನೇ ।

61. **ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** 1 × 3 = 3

"ಸತಿಪತಿಗಳೊಂದಾಗದವನ ಭಕ್ತಿ ಅಮೃತದೊಳು ವಿಷ ಬೆರೆದಂತೆ"

***ಅಥವಾ***

"ಅಳ್ಳಿರಿಯುತಿಪ್ಪ ಎಮ್ಮ ಒಡಲ ಬೇಗೆಯ ಬೆಂಕಿಯುರಿ ನಿನ್ನನಿರಿಯದೆ ಪೇಳು ವಿಶ್ವಾಮಿತ್ರ"

## ವಿಭಾಗ – 'ಸಿ'

### (ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲ)

62. **ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ *ಒಂದನ್ನು* ವಿಸ್ತರಿಸಿ ಬರೆಯಿರಿ :** 1 × 3 = 3

- ಅತಿಯಾಸೆ ಗತಿಕೇಡು
- ಹೆತ್ತತಾಯಿ, ಹೊತ್ತನಾಡು ಸ್ವರ್ಗಕ್ಕಿಂತಲೂ ಮಿಗಿಲು
- ಮಾತು ಬಲ್ಲವನಿಗೆ ಜಗಳವಿಲ್ಲ; ಊಟ ಬಲ್ಲವನಿಗೆ ರೋಗವಿಲ್ಲ.

63. ನಿಮ್ಮನ್ನು ಮೈಸೂರಿನ ದೇವಲಾಪುರ ಸರ್ಕಾರಿ ಪ್ರೌಢಶಾಲೆಯ 'ವಿದ್ಯಾಶಂಕರ' ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ಆಚರಿಸಿದ 'ವಿಜ್ಞಾನ ವಸ್ತುಪ್ರದರ್ಶನ' ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ 'ದಿಗ್ವಿಜಯ' ದಿನಪತ್ರಿಕೆಯ ಸಂಪಾದಕರಿಗೆ ಒಂದು ಮನವಿ ಪತ್ರ ಬರೆಯಿರಿ. 1 × 5 = 5

***ಅಥವಾ***

ನಿಮ್ಮನ್ನು ಮೈಸೂರಿನ ಮೊರಾರ್ಜಿ ಶಾಲೆಯ ವಿದ್ಯಾರ್ಥಿನಿ 'ಸಹನ' ಎಂದು ಭಾವಿಸಿಕೊಂಡು ಚಾಮರಾಜನಗರದ ಶಂಕರಪುರ ಬಡಾವಣೆಯಲ್ಲಿ ವಾಸವಾಗಿರುವ 'ಶೋಭಾರಾಣಿ' ಎಂಬ ಹೆಸರಿನ ತಾಯಿಯವರಿಗೆ ನಿಮ್ಮ ಪರೀಕ್ಷಾ ಸಿದ್ಧತೆ ಕುರಿತು ಒಂದು ಪತ್ರ ಬರೆಯಿರಿ.

64. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ *ಒಂದನ್ನು* ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ :** 1 × 5 = 5

- ಶಿಕ್ಷಣಾಭಿವೃದ್ಧಿಯಲ್ಲಿ ಆಧುನಿಕ ತಂತ್ರಜ್ಞಾನದ ಮಹತ್ವ
- ರಾಷ್ಟ್ರೀಯ ಹಬ್ಬಗಳ ಆಚರಣೆಯ ಮಹತ್ವ
- ಜಲಮಾಲಿನ್ಯ ಮತ್ತು ಪರಿಹಾರೋಪಾಯಗಳು